# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕೋರ್ಟ್ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 29/05/2019

# ಮುಂಬಡ್ತಿ: ಜ್ಯೇಷ್ಠತಾ ಪಟ್ಟಿ ತಯಾರಿಸಲು ಕಾರ್ಯಾಗಾರ

ಉ.ವಾ 29/5/19

**ಬೆಂಗಳೂರು:** ಪರಿಶಿಷ್ಟ ಜಾತಿ ಮತ್ತು ಪಂಗಡ ನೌಕರರ ಮುಂಬಡ್ತಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ನೀಡಿರುವ ತೀರ್ಪಿನಂತೆ ನೌಕರರ ಜೇಷ್ಠತಾ ಪಟ್ಟಿ ಸಿದ್ಧಪಡಿಸುವ ಸಂಬಂಧ ಆಡಳಿತ ಮತ್ತು ಸಿಬ್ಬಂದಿ ಸುಧಾರಣೆ ಇಲಾಖೆ ವತಿಯಿಂದ ತರಬೇತಿ ಕಾರ್ಯಾಗಾರ ನಡೆಸಲಾಯಿತು. ವಿಕಾಸಸೌಧದಲ್ಲಿ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಎಲ್ಲ ಇಲಾಖೆಗಳ ಮುಖ್ಯಸ್ಥರು ಪಾಲ್ಗೊಂಡು ನ್ಯಾಯಾಲಯದ ಸೂಚನೆಯಂತೆ ಜೇಷ್ಠತಾ ಪಟ್ಟಿ ತಯಾರಿಸುವ ಬಗ್ಗೆ ತರಬೇತಿ ಪಡೆದರು. ಜೇಷ್ಠತಾ ಪಟ್ಟಿ ತಯಾರಿಸುವ ಸಂಬಂಧ ಕೆಲವು ಗೊಂದಲಗಳು ಇದ್ದ ಕಾರಣ ಸಮಸ್ಯೆಯುಂಟಾಗಿತ್ತು. ಹೀಗಾಗಿ, ತರಬೇತಿ ಕಾರ್ಯಾಗಾರ ನಡೆಸಲಾಯಿತು. ನ್ಯಾಯಾಲಯದ ಸೂಚನೆಯಂತೆ ಜೇಷ್ಠತಾ ಪಟ್ಟಿ ತಯಾರಿಸಬೇಕು. ಆದರಲ್ಲಿ ಯಾವುದೇ ಲೋಪವಾಗದಂತೆ ಎಚ್ಚರವಹಿಸಬೇಕು ಎಂದು ಸೂಚನೆ ನೀಡಲಾಯಿತು. ಒಂದು ತಿಂಗಳಲ್ಲಿ ಜೇಷ್ಠತಾ ಪಟ್ಟಿ ಸಿದ್ಧಪಡಿಸಲು ನ್ಯಾಯಾಲಯವು ಸೂಚನೆ ನೀಡಿದ್ದು, ಅಷ್ಟರಲ್ಲಿ ಪಟ್ಟಿ ಸಿದ್ಧಪಡಿಸಿ ಅನುಷ್ಠಾನಗೊಳಿಸಬೇಕಾಗಿದೆ.